# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1190

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಎನ್.ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 16.03.2021

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬಸ್ಸು ನಿಲ್ದಾಣಗಳಲ್ಲಿ ಕುಡಿಯುವ ನೀರು, ಇತರ ಪಾನೀಯ ಹಾಗೂ ಆಹಾರ ವಸ್ತುಗಳನ್ನು ಎಂ.ಆರ್.ಪಿ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಸ್ಸು ನಿಲ್ದಾಣಗಳಲ್ಲಿ ಕುಡಿಯುವ ನೀರು, ಇತರೆ ಪಾನೀಯ ಹಾಗೂ ಆಹಾರ ವಸ್ತುಗಳನ್ನು ಎಂ.ಆರ್.ಪಿ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| (ಆ) | ಬೆಂಗಳೂರಿನ ಮೆಜೆಸ್ಟಿಕ್ ಬಸ್ಸು ನಿಲ್ದಾಣದಲ್ಲಿರುವ ಎಲ್ಲಾ ಚಿಲ್ಲರೆ ಮಾರಾಟಗಾರರು ಆಹಾರ ಪದಾರ್ಥಗಳನ್ನು ಅದರ ಮೂಲ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದು ಈ ವರ್ತಕರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ; | ಬೆಂಗಳೂರಿನ ಮೆಜೆಸ್ಟಿಕ್ ಬಸ್ಸು ನಿಲ್ದಾಣದಲ್ಲಿರುವ ಎಲ್ಲಾ ಚಿಲ್ಲರೆ ಮಾರಾಟಗಾರರು ಆಹಾರ ಪದಾರ್ಥಗಳನ್ನು ಅದರ ಮೂಲ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವವರ ವಿರುದ್ಧ ಕಾನೂನು ಮಾಪನಶಾಸ್ತ್ರ ಇಲಾಖಾ ಕ್ಷೇತ್ರಾಧಿಕಾರಿಗಳು ಆಗಿಂದಾಗ್ಗೆ ತಪಾಸಣಾ ಕಾರ್ಯಗಳನ್ನು ನಡೆಸಿ ಈ ರೀತಿಯ ಪ್ರಕರಣಗಳು ಕಂಡು ಬಂದಲ್ಲಿ ದಿ ಲೀಗಲ್ ಮೆಟ್ರಾಲಜಿ (ಪೊಟ್ಟಣ ಸಾಮಗ್ರಿ) ನಿಯಮಗಳು 2011ರ ನಿಯಮಗಳಡಿಯಲ್ಲಿ ಮೊಕದ್ದಮೆಗಳನ್ನು ದಾಖಲಿಸಲಾಗುತ್ತಿದೆ ಮತ್ತು ಈ ಪ್ರಕರಣಗಳನ್ನು ನಿಯಮಾನುಸಾರ ಇತ್ಯರ್ಥಪಡಿಸಿ ಅಭಿಸಂಧಾನ ದಂಡವನ್ನು ಸಂಗ್ರಹಿಸಲಾಗುತ್ತಿದೆ. |
| (ಇ) | ಕಳೆದ ಮೂರು ವರ್ಷಗಳಲ್ಲಿ ಎಂ.ಆರ್.ಪಿ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ | ಕಳೆದ ಮೂರು ವರ್ಷಗಳಲ್ಲಿ ಎಂ.ಆರ್.ಪಿ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿರುವ ವರ್ತಕರ ಮೇಲೆ |

<table>
<tr>
<td></td>
<td>ಮಾಡುತ್ತಿರುವ ಎಷ್ಟು ವರ್ತಕರ ಮೇಲೆ ಪ್ರಕರಣ ದಾಖಲು ಮಾಡಲಾಗಿದೆ ಹಾಗೂ ಎಷ್ಟು ಅಂಗಡಿಗಳ ಅನುಮತಿಯನ್ನು ರದ್ದು ಪಡಿಸಲಾಗಿದೆ?</td>
<td>ದಾಖಲಾಗಿರುವ ದಾಖಲಾಗಿರುವ ಪ್ರಕರಣಗಳು ಈ ಕೆಳಗಿನಂತಿದೆ.
<table>
<tr><th>ಕ್ರ.ಸಂ</th><th>ವರ್ಷ</th><th>ಪ್ರಕರಣಗಳ ಸಂಖ್ಯೆ</th></tr>
<tr><td>1.</td><td>2017-18</td><td>371</td></tr>
<tr><td>2.</td><td>2018-19</td><td>261</td></tr>
<tr><td>3.</td><td>2019-20</td><td>295</td></tr>
</table>
ತಪ್ಪಿತಸ್ಥರ ವಿರುದ್ಧ ದಿ ಲೀಗಲ್ ಮೆಟ್ರಾಲಜಿ (ಪೊಟ್ಟಣ ಸಾಮಗ್ರಿ) ನಿಯಮಗಳು 2011ರ ನಿಯಮಗಳಡಿಯಲ್ಲಿ ಮೊಕದ್ದಮೆಗಳನ್ನು ದಾಖಲಿಸಲಾಗುತ್ತಿದೆ ಮತ್ತು ಈ ಪ್ರಕರಣಗಳನ್ನು ನಿಯಮಾನುಸಾರ ಇತ್ಯರ್ಥಪಡಿಸಿ ಅಭಿಸಂಧಾನ ದಂಡವನ್ನು ಸಂಗ್ರಹಿಸಲಾಗುತ್ತಿದೆ ಹಾಗೂ ಅಭಿಸಂಧಾನ ದಂಡವನ್ನು ಭರಿಸಲು ನಿರಾಕರಿಸುವವರ ವಿರುದ್ಧ ಸಂಬಂಧಿಸಿದ ಕ್ಷೇತ್ರವ್ಯಾಪ್ತಿಯ ಜೆ.ಎಂ.ಎಫ್.ಸಿ ಕೋರ್ಟ್‌ನಲ್ಲಿ ದಾವೆ ಹೂಡಲಾಗುತ್ತಿದೆ ಮತ್ತು ಮಾನ್ಯ ನ್ಯಾಯಾಲಯದ ಆದೇಶದಂತೆ ಕ್ರಮ ಕೈಗೊಳ್ಳಲಾಗುತ್ತಿದೆ.</td>
</tr>
</table>

ಸಂಖ್ಯೆ: ಆನಾಸ 22 ಕಾಮಾಸೇ 2021 (ಇ-ಆಫೀಸ್)

(ಉಮೇಶ್ ವಿ. ಕತ್ತಿ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಹಾಗೂ
ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು